**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.**

ಸಿ.ಸಿ.ನಂಃ **1904/2023** ಸಿ.ಡಬ್ಲ್ಯೂ–**19** ಪಿ.ಡಬ್ಲ್ಯೂ-**3**

| | | |
|---|---|---|
| ಹೆಸರು | ಃ | ಶಿವಾನಂದ |
| ತಂದೆಃಗಂಡ | ಃ | ಮಲ್ಲಿಕಪ್ಪಾ |
| ವಯಸ್ಸು | ಃ | ೩೨ ವರ್ಷ |
| ಉದ್ಯೋಗ | : | ಪಿ.ಎಸ್.ಐ ನಿಂಬರ್ಗಾ |
| ವಾಸಸ್ಥಳ | ಃ | ನಿಂಬರ್ಗಾ |

ದಿನಾಂಕಃ **22.08.2025**

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದಃ**

ನಾನು 2019 ರಿಂದ 2024 ರವರೆಗೆ ನಾನು ನರೋಣಾ ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ ಅಂತಾ ಕಾರ್ಯ ನಿರ್ವಹಿಸಿದ್ದೇನೆ.

ದಿಃ 23-03-2023 ರಂದು ಚಾಸಾ 1 ರವರು ನೀಡಿದ ಫಿರ್ಯಾದಿ ಮೇರೆಗೆ ಆ ಪಿರ್ಯಾಧಿಯನ್ನು ಪಡೆದುಕೊಂಡು ಅದರ ಆಧಾರದ ಮೇಲೆ ಠಾಣಾ ಗುನ್ನಾ ಸಂಖ್ಯೆ 38/2023 ನ್ನು ತಯಾರಿಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತೇನೆ. ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಮ್ಮ ಸಿಬ್ಬಂದಿಯ ಮುಖಾಂತರ ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಸಾಯಂಕಾಲ 4.00 ರಿಂದ 5.00 ಗಂಟೆಯವರೆಗೆ ಚಾಸಾ 4 ಮತ್ತು 5 ರವರ ಸಮಕ್ಷಮ ಗುನ್ನಾ ಸ್ಥಳದ ಪಂಚನಾಮೆಯನ್ನು ಮಾಡಿರುತ್ತೇನೆ. ಅದೇ ದಿನ ರಾತ್ರಿ 8.45 ರಿಂದ 9.45 ರವರೆಗೆ ಆಸ್ಪತ್ರೆಗೆ ಹೋಗಿ ಪಂಚರಾದ ಚಾಸಾ 2 ಮತ್ತು 3 ರವರ ಸಮಕ್ಷಮದಲ್ಲಿ ಶವ ಪಂಚನಾಮೆ ಮಾಡಿರುತ್ತೇನೆ. ಮುಂದಿನ ತನಿಖೆಗಾಗಿ ಚಾಸಾ 15 ರವರಿಗೆ ಕಡತವನ್ನು ನೀಡಿರುತ್ತೇನೆ.

ಸಾಕ್ಷಿಯು ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 7 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ. 7 ಎ ಎಂದು ಗುರುತಿಸಲಾಯಿತು. ನಿಪಿ. 1 ರಲ್ಲಿ

ಇರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 1 ಬಿ ಅಂತಾ ಗುರುತಿಸಲಾಯಿತು. ನಿಪಿ. 2 ರಲ್ಲಿ ಇರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 2 ಎ ಅಂತಾ ಗುರುತಿಸಲಾಯಿತು. ನಿಪಿ. 4 ರಲ್ಲಿ ಇರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 4 ಎ ಅಂತಾ ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>

ಘಟನೆ ನಡೆದ ಮೂರು ದಿನಗಳ ನಂತರ ನಾನು ಘಟನಾ ಸ್ಥಳಕ್ಕೆ ಹೋಗಿರುತ್ತೇನೆ. ನಾನು ವಾಹನ ಸ್ಕಿಡ್ ಆಗಿದ್ದನ್ನು ತೋರಿಸಲು ಟೈಯರ್ ಗುರುತುಗಳನ್ನು ಸ್ಥಳದಿಂದ ತೆಗೆದುಕೊಂಡಿರುವುದಿಲ್ಲ. ನಿಪಿ. 4 ರಲ್ಲಿ ವಾಹನವು ತಗ್ಗಿನಲ್ಲಿ ಹೋಗಿ ಸ್ಕೀಡ ಆಗಿರುತ್ತದೆ ಎಂದು ನಕಾಶೆಯಲ್ಲಿ ಸರಿಯಾಗಿ ನಮೂದಿಸಿಲ್ಲ ಎಂದರೆ ಸರಿಯಲ್ಲ. ನಾನು 2019 ರಿಂದ 2024 ರವರೆಗೆ ನಾನು ನರೋಣಾ ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ ಅಂತಾ ಕಾರ್ಯ ನಿರ್ವಹಿಸಿದ್ದೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 23-03-2023 ರಂದು ಚಾಸಾ 1 ರವರು ನೀಡಿದ ಫಿರ್ಯಾದಿ ಮೇರೆಗೆ ಆ ಪಿರ್ಯಾಧಿಯನ್ನು ಪಡೆದುಕೊಂಡು ಅದರ ಆಧಾರದ ಮೇಲೆ ಠಾಣಾ ಗುನ್ನಾ ಸಂಖ್ಯೆ 38/2023 ನ್ನು ತಯಾರಿಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಮ್ಮ ಸಿಬ್ಬಂದಿಯ ಮುಖಾಂತರ ಕಳುಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ಸಾಯಂಕಾಲ 4.00 ರಿಂದ 5.00 ಗಂಟೆಯವರೆಗೆ ಚಾಸಾ 4 ಮತ್ತು 5 ರವರ ಸಮಕ್ಷಮ ಗುನ್ನಾ ಸ್ಥಳದ ಪಂಚನಾಮೆಯನ್ನು ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ರಾತ್ರಿ 8.45 ರಿಂದ 9.45 ರವರೆಗೆ ಆಸ್ಪತ್ರೆಗೆ ಹೋಗಿ ಪಂಚರಾದ ಚಾಸಾ 2 ಮತ್ತು 3 ರವರ ಸಮಕ್ಷಮದಲ್ಲಿ ಶವ ಪಂಚನಾಮೆ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮುಂದಿನ ತನಿಖೆಗಾಗಿ ಚಾಸಾ 15 ರವರಿಗೆ ಕಡತವನ್ನು ನೀಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇರುವುದಿಲ್ಲಃ

ಓ.ಹೇ.ಕೇ.ಸರಿ ಇದೆ.

ಸಿ.ಸಿ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ.